ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಒಂಭತ್ತನೇ ಅಧಿವೇಶನ

(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 18ನೇ ಮಾರ್ಚ್, 2021

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿಮೂರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿಮೂರನೇ ಪಟ್ಟಿ

2. ಶಾಸನ ರಚನೆ

ವಿಧೇಯಕವನ್ನು ಮಂಡಿಸುವುದು

ಶ್ರೀ ಎಸ್. ಅಂಗಾರ (ಮಾನ್ಯ ಮೀನುಗಾರಿಕೆ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. ವಿತ್ತೀಯ ಕಾರ್ಯಕಲಾಪಗಳು

2021–22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ. (ನಾಲ್ಕನೇ ದಿನ)

..2/

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಕೆ.ಆರ್. ರಮೇಶ್ ಕುಮಾರ್, ಕೃಷ್ಣಬೈರೇಗೌಡ, ಡಾ. ಅಜಯ್ ಧರ್ಮಸಿಂಗ್, ಹೆಚ್.ಪಿ. ಮಂಜುನಾಥ್ ಹಾಗೂ ಇತರರು** – ರಾಜ್ಯದಲ್ಲಿ ಪೆಟ್ರೋಲ್, ಡೀಸಲ್, ಅಡುಗೆ ಅನಿಲ ಮತ್ತು ಜೀವನಾವಶ್ಯಕ ವಸ್ತುಗಳ ಬೆಲೆ ಏರಿಕೆಯನ್ನು ತಡೆಗಟ್ಟುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಬಂಡೆಪ್ಪ ಖಾಶೆಂಪೂರ್, ಕೆ.ಎಂ. ಶಿವಲಿಂಗೇಗೌಡ, ಆರ್. ಮಂಜುನಾಥ್ ಹಾಗೂ ಇತರರು** – ಮಾಯನೂರು ಜಲಾಶಯವನ್ನು ಗುಂಡಾರು, ದಕ್ಷಿಣ ವೆಲ್ಲೂರು ಮತ್ತು ವೈಗಾಯಿ ನದಿಗಳೊಂದಿಗೆ ಜೋಡಣೆ ಮಾಡುವ ನಿರ್ಮಾಣ ಕಾರ್ಯದಿಂದಾಗಿ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

3) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ಹೆಚ್.ಕೆ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಅಶ್ವಿನ್ ಕುಮಾರ್ ಎಂ. ಹಾಗೂ ಇತರರು** – ರಾಜ್ಯದಲ್ಲಿ ಸ್ಥಗಿತಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಒದಗಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

4) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಸಾ.ರಾ. ಮಹೇಶ್, ಹೆಚ್.ಕೆ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಸುರೇಶ್‌ಗೌಡ ಹಾಗೂ ಇತರರು** – ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಯಲ್ಲಿ ಬರುವ ವಿವಿಧ ವಲಯಗಳ ವ್ಯಾಪ್ತಿಯಲ್ಲಿ ಭರವಸೆ ಪತ್ರ ನೀಡಿ ಹಣ ಪಾವತಿಸದಿರುವುದರಿಂದ ಗುತ್ತಿಗೆದಾರರಿಗೆ ಹಾಗೂ ಭೂಪರಿಹಾರ ಬಾಬ್ತನ್ನು ಪಾವತಿಸದೇ ಇರುವುದರಿಂದ ರೈತರಿಗೆ ಆಗಿರುವ ತೊಂದರೆಯ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

5. ಶಾಸನ ರಚನೆ

<u>ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು</u>

1. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಕೃಷ್ಣ ಜಲಾನಯನ ಪ್ರದೇಶಾಭಿವೃದ್ಧಿ ಪ್ರಾಧಿಕಾರ (ನಿರಸನಗೊಳಿಸುವ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:-

ಅ) 2021ನೇ ಸಾಲಿನ ಕರ್ನಾಟಕ ಸೊಸೈಟಿಗಳ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ಅರ್ಧ ಗಂಟೆ ಕಾಲಾವಧಿ ಚರ್ಚೆ

1) **ಶ್ರೀ ದೊಡ್ಡನಗೌಡ ಜಿ. ಪಾಟೀಲ್ ಇವರು** – "ಹುನಗುಂದ ತಾಲ್ಲೂಕಿನ ಮರೋಳ ಏತ ನೀರಾವರಿ ಯೋಜನೆ ಎರಡನೇ ಹಂತದ ಕಳಪೆ ಕಾಮಗಾರಿ" ಕುರಿತು ದಿನಾಂಕ:09.03.2021ರ ಗಮನ ಸೆಳೆಯುವ ಸೂಚನೆಗೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2) **ಶ್ರೀ ಎ.ಟಿ. ರಾಮಸ್ವಾಮಿ ಇವರು** – "ರಾಜ್ಯದಲ್ಲಿನ ಕುಡಿಯುವ ನೀರಿನ ಸಮಸ್ಯೆ" ಕುರಿತು ದಿನಾಂಕ:15.03.2021ರಂದು ಶೂನ್ಯವೇಳೆಯಡಿ ಪ್ರಸ್ತಾಪಿಸಿರುವುದಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

3) **ಶ್ರೀ ಬಂಡೆಪ್ಪ ಕಾಶೆಂಪೂರ್ ಇವರು** – "ವಿದ್ಯುತ್ ಸಂಪರ್ಕ" ಕುರಿತು ದಿನಾಂಕ:09.03.2021ರಂದು ಏಳನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 94(1231)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

7. ಗಮನ ಸೆಳೆಯುವ ಸೂಚನೆಗಳು

1) **ಡಾ: ಅಜಯ್ ಧರ್ಮಸಿಂಗ್ ಅವರು** – ಕೊರೋನ ಹಿನ್ನಲೆಯಲ್ಲಿ ಸ್ಥಗಿತಗೊಳಿಸಲಾಗಿದ್ದ ಬಿಸಿಯೂಟ ವ್ಯವಸ್ಥೆಯನ್ನು ಪುನ: ರಾಜ್ಯದಲ್ಲಿ ಜಾರಿಗೆ ತರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

2) **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹಾಸನ ಜಿಲ್ಲೆಯ ಯಗಚಿ ಜಲಾಶಯ ಯೋಜನೆಯ ಎಡದಂಡೆ ನಾಲೆ, ಕಾಮಸಮುದ್ರ ನಾಲೆಯ ನಿರ್ಮಾಣಕ್ಕೆ ಸಂಬಂಧಿಸಿದ ಕಾಮಗಾರಿಗಳನ್ನು ಪ್ರಾರಂಭಿಸಲು ಭೂಸ್ವಾಧೀನದ ಮೊಬಲಗು ಹಾಗೂ ಭೂಸ್ವಾಧೀನ ಪ್ರಕರಣಗಳ ಅವಾರ್ಡ್ ಮತ್ತು ನ್ಯಾಯಾಲಯ ಪ್ರಕರಣಗಳ ಮೊಬಲಗಿನ ಮೊತ್ತವನ್ನು ಜಿಲ್ಲಾಧಿಕಾರಿಗಳ ಖಾತೆಗೆ ಠೇವಣಿ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3) **ಶ್ರೀ ಎಸ್.ಆರ್. ಶ್ರೀನಿವಾಸ್ ಅವರು** – ರಾಜ್ಯದಲ್ಲಿ "ತಿಗಳ ಜನಾಂಗದ ಅಭಿವೃದ್ಧಿ ನಿಗಮ"ವನ್ನು ಸ್ಥಾಪನೆ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4) **ಶ್ರೀ ಪಿ. ರಾಜೀವ್ ಅವರು** – ಬೆಂಗಳೂರಿನ ದೀಪಾಂಜಲಿ ನಗರ ವಾರ್ಡ್‌ನ ವ್ಯಾಪ್ತಿಯ ಕೊಳಗೇರಿ ಪ್ರದೇಶದಲ್ಲಿ ವಾಸಿಸುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಕುಟುಂಬಗಳಿಗೆ ಮನೆ ಹಂಚಿಕೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5) **ಶ್ರೀ ಅಮೃತ ಅ. ದೇಸಾಯಿ ಅವರು** – ವಿವಿಧ ಜಿಲ್ಲೆಗಳಿಂದ ವಿದ್ಯಾಭ್ಯಾಸಕ್ಕಾಗಿ ಧಾರವಾಡಕ್ಕೆ ಬರುತ್ತಿರುವ ವಿದ್ಯಾರ್ಥಿಗಳಿಗೆ ಒದಗಿಸುವ ಸಲುವಾಗಿ ಹೊಸ ಹಾಸ್ಟೆಲ್‌ಗಳನ್ನು ಮಂಜೂರು ಮಾಡುವ ಬಗ್ಗೆ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

6) **ಶ್ರೀ ವೆಂಕಟರಾವ್‌ನಾಡ ಗೌಡ ಅವರು** – ಸಿಂಧನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಜಲ್ ಜೀವನ್ ಮಿಷನ್ ಯೋಜನೆಯಡಿ ನೀರಿನ ಸಂಗ್ರಹಣೆ ಮಾಡಿ ಕುಡಿಯುವ ನೀರನ್ನು ಒದಗಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

7) **ಶ್ರೀ ಸಾ.ರಾ. ಮಹೇಶ್ ಅವರು** – ಲೋಕೋಪಯೋಗಿ ಇಲಾಖೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರ ಹುದ್ದೆಯಿಂದ ಸೇವಾ ಜೇಷ್ಠತೆಯನ್ವಯ ಕಾರ್ಯಪಾಲಕ ಅಭಿಯಂತರರ ಹುದ್ದೆಗೆ ಪದೋನ್ನತಿ ನೀಡುವ ಬಗ್ಗೆ ಮಾನ್ಯ ಉಪಮುಖ್ಯಮಂತ್ರಿಯವರ (ಲೋಕೋಪಯೋಗಿ) ಗಮನ ಸೆಳೆಯುವುದು.

8) **ಶ್ರೀ ಬಸನಗೌಡ ದದ್ದಲ ಅವರು** – ರಾಯಚೂರು ಜಿಲ್ಲೆಯಲ್ಲಿ ವೈಟಿಪಿಎಸ್ ಮತ್ತು ಆರ್‌ಟಿಪಿಎಸ್‌ಗಳಲ್ಲಿ ಸ್ಥಗಿತಗೊಳಿಸಲಾಗಿರುವ ವಿದ್ಯುತ್ ಉತ್ಪಾದನೆಯನ್ನು ಪುನರ್ ಪ್ರಾರಂಭಿಸುವ ಮೂಲಕ ಅಲ್ಲಿನ ಕಾರ್ಮಿಕರಿಗೆ ಉದ್ಯೋಗ ದೊರಕಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

9) **ಶ್ರೀ ಬಿ.ಕೆ. ಸಂಗಮೇಶ್ವರ್ ಅವರು** – ಭದ್ರಾವತಿ ತಾಲ್ಲೂಕಿನ ಮೈಸೂರು ಕಾಗದ ಕಾರ್ಖಾನೆಯನ್ನು ಆಧುನೀಕರಣಗೊಳಿಸಿ ಸರ್ಕಾರದ ವತಿಯಿಂದ ಪುನರ್ ಪ್ರಾರಂಭಿಸುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

..5/

10) **ಶ್ರೀ ಎಂ.ಪಿ. ಅಪ್ಪಚ್ಚು (ರಂಜನ್) ಅವರು** – ಕೊಡಗು ಜಿಲ್ಲೆಯಲ್ಲಿ ಅತಿವೃಷ್ಟಿಯಿಂದಾಗಿ ತೊಂದರೆಗೊಳಗಾಗಿರುವ ಕಾಫಿ ಬೆಳೆಗಾರರು ಮತ್ತು ರೈತರ ಪಂಪ್‌ಸೆಟ್‌ಗಳಿಗೆ 10 ಹೆಚ್.ಪಿ. ವರೆಗೆ ಉಚಿತವಾಗಿ ವಿದ್ಯುತ್ ಸಂಪರ್ಕವನ್ನು ಕಲ್ಪಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

11) **ಶ್ರೀ ಕೆ.ಎಸ್. ಲಿಂಗೇಶ್ ಅವರು** – ಬೇಲೂರು ತಾಲ್ಲೂಕಿನ ಅರೆಹಳ್ಳಿ ಮತ್ತು ಬಿಕ್ಕೋಡು ಹೋಬಳಿಗಳಲ್ಲಿ ಬೀಡು ಬಿಟ್ಟಿರುವ ಕಾಡಾನೆಗಳನ್ನು ತೆರವುಗೊಳಿಸುವ ಬಗ್ಗೆ ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm